# ಮಂಗಳೂರು ಮಹಾನಗರ ಪಾಲಿಕೆ

ಲಾಲ್‌ಭಾಗ್, ಎಂ.ಜಿ.ರಸ್ತೆ, ಮಂಗಳೂರು-575 003, ಕರ್ನಾಟಕ, ಭಾರತ

ಫೋನ್: 0824 2220313-18
ಫ್ಯಾಕ್ಸ್: 0824 2220309

e-mail:-commissioner.mcc@gmail.com
ವೆಬ್‌ಸೈಟ್:-www.mangalorecity.gov.in


ಸಂಖ್ಯೆ/ಮ.ನ.ಪಾ/ಇಎಸ್‌ಟಿ 1/ಸಿ.ಆರ್.08/2026-27

ದಿನಾಂಕ: 08-10-2026

## ಅಧಿಸೂಚನೆ

ವಿಷಯ: ರಾಜ್ಯದ ಮಹಾನಗರಪಾಲಿಕೆಗಳಲ್ಲಿ ಹೊರಗುತ್ತಿಗೆಯಡಿ ಕಾರ್ಯ ನಿರ್ವಹಿಸುತ್ತಿರುವ ಒಳಚರಂಡಿ ಸಹಾಯಕರನ್ನು ನೇರ ನೇಮಕಾತಿಗೊಳಿಸುವ ಬಗ್ಗೆ

ಉಲ್ಲೇಖ:

1. ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರ ಆದೇಶ ಸಂಖ್ಯೆ 1359725:ಡಿಎಂಎ: ಇಎಸ್‌ಟಿ:03:ಇತರೆ:53:2024 ದಿನಾಂಕ: 24-08-2026.
2. ಸರಕಾರದ ಅಧಿಸೂಚನೆ ಸಂಖ್ಯೆ ನಅಇ 77 ಎಂಎನ್‌ಇ 2018 (ಇ) ದಿನಾಂಕ 24-07-2026
3. ಸರಕಾರದ ಆದೇಶ ಸಂಖ್ಯೆ ನಅಇ 188 ಎಂ ಎನ್ ಇ 2022 ದಿನಾಂಕ: 20-12-2022

*************

ರಾಜ್ಯದ ಮಹಾನಗರಪಾಲಿಕೆಗಳಲ್ಲಿ ಹೊರಗುತ್ತಿಗೆಯಡಿ ಕಾರ್ಯ ನಿರ್ವಹಿಸುತ್ತಿರುವ ಒಳಚರಂಡಿ ಸಹಾಯಕರನ್ನು ನೇರ ನೇಮಕಾತಿಗೊಳಿಸಲು ಕ್ರಮವಹಿಸುವ ಬಗ್ಗೆ ಉಲ್ಲೇಖ (1)ರ ಸರ್ಕಾರದ ಆದೇಶದನ್ವಯ, ರಾಜ್ಯದ ಮಹಾನಗರಪಾಲಿಕೆಗಳಿಗೆ ಹಂಚಿಕೆ ಮಾಡಲಾದ 477 ಹುದ್ದೆಗಳ ಪೈಕಿ ಮಂಗಳೂರು ಮಹಾನಗರಪಾಲಿಕೆಗೆ 45 ಹುದ್ದೆಗಳು ಹಂಚಿಕೆಯಾಗಿರುತ್ತದೆ. ಉಲ್ಲೇಖ (3) ರಂತೆ "ಡಿ" ಗ್ರೂಪ್ ಹುದ್ದೆಗಳ ನೇಮಕಾತಿಯ ಸಕ್ಷಮ ಪ್ರಾಧಿಕಾರ ಆಯಾ ಪಾಲಿಕೆಯ ಆಯುಕ್ತರುಗಳಾಗಿರುವುದರಿಂದ ಸದರಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಷರತ್ತುಗಳಿಗೆ ಒಳಪಟ್ಟು ಪಾಲಿಕೆಗಳ ಹಂತದಲ್ಲಿ ನಿಯಮಾನುಸಾರ ತುರ್ತಾಗಿ ಹುದ್ದೆಗಳ ಭರ್ತಿಗೆ ಕ್ರಮವಹಿಸಲು ಅನುಮೋದನೆಯಾಗಿರುತ್ತದೆ.

ಮಹಾನಗರಪಾಲಿಕೆಗಳಲ್ಲಿ ಹೊರಗುತ್ತಿಗೆಯಡಿ ಸೇವೆ ಸಲ್ಲಿಸುತ್ತಿರುವ ಒಳಚರಂಡಿ ಸಹಾಯಕರನ್ನು ಖಾಲಿ ಇರುವ ಒಳಚರಂಡಿ ಸಹಾಯಕರನ್ನು ನೇರನೇಮಕಾತಿ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳುವ ಬಗ್ಗೆ ಉಲ್ಲೇಖ(1) ಮತ್ತು (2)ರ ಮಾನ್ಯ ಸರಕಾರದ ಅಧಿಸೂಚನೆಯಂತೆ ನೇಮಕಾತಿ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿರುತ್ತದೆ.

ಮಂಗಳೂರು ಮಹಾನಗರಪಾಲಿಕೆಯಲ್ಲಿ ಹೊರಗುತ್ತಿಗೆಯಡಿ ಒಳಚರಂಡಿ ಸಹಾಯಕರಾಗಿ ಸೇವೆ ಸಲ್ಲಿಸುತ್ತಿರುವ ಅರ್ಹ ಅಭ್ಯರ್ಥಿಗಳಿಂದ ಆಫ್ ಲೈನ್ ಮೂಲಕ ಅರ್ಜಿಗಳನ್ನು ದಿನಾಂಕ: **12-10-2026** ರಿಂದ ದಿನಾಂಕ: **28-10-2026** ರವರೆಗೆ ಮಹಾನಗರಪಾಲಿಕೆಯ ಆಡಳಿತ ಶಾಖೆಯಿಂದ ಅರ್ಜಿ ನಮೂನೆಯನ್ನು ಪಡೆದುಕೊಂಡು ಈ ಕಛೇರಿಗೆ ಅರ್ಜಿಗಳನ್ನು ನಿಗದಿತ ದಾಖಲೆಗಳೊಂದಿಗೆ ನಿಗದಿತ ಕಡೆಯ ದಿನಾಂಕ: **28-10-2026** ರ ಸಂಜೆ **05:00** ಗಂಟೆಯೊಳಗಾಗಿ ಸಲ್ಲಿಸಬಹುದಾಗಿದೆ.

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ಕನಿಷ್ಠ ವಿದ್ಯಾರ್ಹತೆ / ಅರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಒಳಚರಂಡಿ ಸಹಾಯಕರು | 45 | 1) ವಿದ್ಯಾರ್ಹತೆ ಅನ್ವಯಿಸುವುದಿಲ್ಲ.<br>2) ಕನ್ನಡ ಮಾತನಾಡಲು ಗೊತ್ತಿರಬೇಕು.<br>3) ಹೊರಗುತ್ತಿಗೆಯಡಿ ಕಾರ್ಯ ನಿರ್ವಹಿಸುತ್ತಿರುವ ಒಳಚರಂಡಿ ಸಹಾಯಕರು ( ವೆಟ್‌ವೆಲ್/STP ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವವರನ್ನು ಹೊರತುಪಡಿಸಿ) ನೇರ ನೇಮಕಾತಿಗೆ ಅರ್ಹರು<br>4) ವಯೋಮಿತಿ ದಿನಾಂಕ: 24-07-2026 ಕ್ಕೆ 55 ವರ್ಷಗಳನ್ನು ಮೀರತಕ್ಕದಲ್ಲ. | 27000-46675 |

## 1. ಹುದ್ದೆಯ ವರ್ಗೀಕರಣ :

| ಕ್ರ. ಸಂ. | ಮಿಸಲಾತಿ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕರು | ಅಂಗವಿಕಲರು | ಯೋಜನಾ ನಿರಾಶ್ರಿತರು | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ | ತೃತೀಯ ಲಿಂಗ | ಇತರೆ | **ಒಟ್ಟು** |
|---|---|---|---|---|---|---|---|---|---|---|
| 1 | ಪರಿಶಿಷ್ಟ ಜಾತಿ | 1 | 0 | 0 | 0 | 3 | 0 | 0 | 3 | **7** |
| 2 | ಪರಿಶಿಷ್ಟ ಪಂಗಡ | 0 | 0 | 0 | 0 | 1 | 0 | 0 | 1 | **2** |
| 3 | ಪ್ರವರ್ಗ 1 | 1 | 0 | 0 | 0 | 0 | 0 | 0 | 1 | **2** |
| 4 | ಪ್ರವರ್ಗ 2ಎ | 2 | 0 | 0 | 1 | 2 | 0 | 0 | 2 | **7** |
| 5 | ಪ್ರವರ್ಗ 2ಬಿ | 2 | 0 | 0 | 0 | 0 | 0 | 0 | 0 | **2** |
| 6 | ಪ್ರವರ್ಗ 3ಎ | 0 | 0 | 0 | 1 | 0 | 0 | 0 | 0 | **1** |
| 7 | ಪ್ರವರ್ಗ 3ಬಿ | 0 | 0 | 0 | 0 | 1 | 0 | 1 | 0 | **2** |
| 8 | ಸಾಮಾನ್ಯ ಅಭ್ಯರ್ಥಿ | 9 | 4 | 3 | 0 | 4 | 2 | 0 | 0 | **22** |
| | **ಒಟ್ಟು** | **15** | **4** | **3** | **2** | **11** | **2** | **1** | **7** | **45** |

## 2. ಅರ್ಜಿ ಶುಲ್ಕ:

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಂಗವಿಕಲರು | ರೂ. 100/- |
| ಇತರರು | ರೂ. 200/- |

ಪಾಲಿಕೆಯ ಆಡಳಿತ ಶಾಖೆಯಿಂದ ಚಲನ್ ಪಡೆದು ಪಾಲಿಕೆಯ ಬ್ಯಾಂಕ್ ಖಾತೆಗೆ (ಕೆನರಾ ಬ್ಯಾಂಕ್) ಜಮೆಗೊಳಿಸಿ ಚಲನ್ ಪ್ರತಿಯನ್ನು ಅರ್ಜಿಯೊಂದಿಗೆ ಆಡಳಿತ ಶಾಖೆಗೆ ನೀಡುವುದು.

## 3. ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:

1. ಒಳಚರಂಡಿ ಸಹಾಯಕರು ಎಂದರೆ ಮಹಾನಗರಪಾಲಿಕೆಗಳಲ್ಲಿ ನೇರಪಾವತಿ ವ್ಯವಸ್ಥೆ, ಕ್ಷೇಮಾಭಿವೃದ್ಧಿ ಅಥವಾ ದಿನಗೂಲಿ ಅಥವಾ ಗುತ್ತಿಗೆ ಅಥವಾ ಸಮಾನ ಕೆಲಸ ಸಮಾನ ವೇತನ ಅಥವಾ ಹೊರಗುತ್ತಿಗೆಯಡಿ ಕನಿಷ್ಠ 2 ವರ್ಷ ಸೇವೆಯನ್ನು ಸಲ್ಲಿಸಿರಬೇಕು. ಮತ್ತು ಈ ನಿಯಮಗಳು ಜಾರಿಗೆ ಬಂದ ದಿನಾಂಕದಲ್ಲಿಯೂ ಹಾಗೂ ಅರ್ಜಿ ಸಲ್ಲಿಸುವ ದಿನಾಂಕದಲ್ಲಿಯೂ ಕಾರ್ಯನಿರ್ವಹಿಸುತ್ತಿರಬೇಕು.
2. ವಯೋಮಿತಿ : ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷ ಹಾಗೂ ದಿನಾಂಕ: 24-07-2026 ಕ್ಕೆ 55 ವರ್ಷಗಳನ್ನು ಮೀರತಕ್ಕದಲ್ಲ.
3. ಕೊನೆಯ ದಿನಾಂಕದ ನಂತರ ಹಾಕಿದ ಅರ್ಜಿಯನ್ನು ಮತ್ತು ಅಪೂರ್ಣವಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
4. ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಂದ (ಪರಿಶೀಲನಾ ಸಮಿತಿಯ ಅಧ್ಯಕ್ಷರು) ಜಾತಿ ಆದಾಯ ಸಿಂದುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
5. 'ತೃತೀಯ' ವರ್ಗೀಕರಣದ ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರವು ನೀಡಿರುವ ಪ್ರಮಾಣಪತ್ರವನ್ನು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು (The Transgender Persons (Protection of Rights) Act, 2019).
6. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾದೀಕಾರ ಇವರು ಕಾಯ್ದಿರಿಸಿಕೊಂಡಿರುತ್ತಾರೆ.
7. ಅಭ್ಯರ್ಥಿಗಳು ಆಯ್ಕೆ ಸಂದರ್ಭದಲ್ಲಿ ಕಛೇರಿ ಸಿಬ್ಬಂದಿ ಅಥವಾ ಸಿಬ್ಬಂದಿಯೇತರ ಮೂಲಗಳ ಮೂಲಕ ಯಾವುದೇ ರೀತಿಯ ಬಾಹ್ಯ ಬೆಂಬಲವನ್ನು ಪಡೆಯುವ ಪ್ರಯತ್ನ ಮಾಡಿದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು/ ಆಯ್ಕೆಯನ್ನು ಅನರ್ಹಗೊಳಿಸಲಾಗುವುದು.

## 4. ಅಂಗವಿಕಲ ಅಭ್ಯರ್ಥಿಗಳು :

ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ: 19-11-2005 ರ ಸರಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೇನನಿ 2005 ರಲ್ಲಿ ನಿಗದಿಪಡಿಸಿದ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

## 5. ಜಾತಿ ಮೀಸಲಾತಿಗೆ ಜಾತಿ ಪ್ರಮಾಣ ಪತ್ರ.

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರಗಳನ್ನು ಚಾಲ್ತಿಯಲ್ಲಿರುವ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದು (ಸಂಬಂಧಪಟ್ಟ ತಹಶೀಲ್ದಾರ್) ಅರ್ಜಿಯೊಂದಿಗೆ ಸಲ್ಲಿಸುವುದು. ಮತ್ತು ಮೂಲ ದಾಖಲೆಗಳನ್ನು ಪರಿಶೀಲಿಸುವ ದಿನಾಂಕದಂದು ಹಾಜರುಪಡಿಸತಕ್ಕದ್ದು.

## 6. ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:

ಸರ್ಕಾರದ ಯೋಜನೆಗಳಿಂದ ನಿರಾಶ್ರಿತರ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ಸಕ್ಷಮ ಪ್ರಾಧಿಕಾರದಿಂದ ಪಡೆದು ಪ್ರಮಾಣ ಪತ್ರವನ್ನು ಪಡೆದು ಅರ್ಜಿಯೊಂದಿಗೆ ಸಲ್ಲಿಸುವುದು. ಮತ್ತು ಮೂಲ ದಾಖಲೆಗಳನ್ನು ಪರಿಶೀಲಿಸುವ ದಿನಾಂಕದಂದು ಹಾಜರುಪಡಿಸತಕ್ಕದ್ದು

## 7. ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

## 8. ಗ್ರಾಮೀಣ ಅಭ್ಯರ್ಥಿ :

ಗ್ರಾಮೀಣ ಅಭ್ಯರ್ಥಿ ಎಂದರೆ 1 ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್. ಎಸ್. ಎಲ್. ಸಿ. ಅಥವಾ ತತ್ಸಮಾನ ಪರೀಕ್ಷೆಯಾಗಿದ್ದಲ್ಲಿ ,1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಮಾಡಿರುವ ಬಗ್ಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ದೃಢೀಕೃತ ಪತ್ರವನ್ನು ಸಲ್ಲಿಸತಕ್ಕದ್ದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಅಭ್ಯರ್ಥಿಗಳು ಗ್ರಾಮಾಂತರ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ,ಈ ಮೀಸಲಾತಿಯನ್ನು ಪಡೆಯಲು ಅರ್ಹರು .

## 9. ಕನ್ನಡ ಮಾಧ್ಯಮ ಅಭ್ಯರ್ಥಿಗಳು :

ಅಭ್ಯರ್ಥಿಯು 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದಲ್ಲಿ, ಈ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಇರುವ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು .

## 10. ಅರ್ಹತಾ ಷರತ್ತುಗಳು :

1. ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.
2. ಒಳಚರಂಡಿ ಸಹಾಯಕರು ಎಂದರೆ ಮಹಾನಗರಪಾಲಿಕೆಗಳಲ್ಲಿ ನೇರಪಾವತಿ ವ್ಯವಸ್ಥೆ, ಕ್ಷೇಮಾಭಿವೃದ್ಧಿ ಅಥವಾ ದಿನಗೂಲಿ ಅಥವಾ ಗುತ್ತಿಗೆ ಅಥವಾ ಸಮಾನ ಕೆಲಸ ಸಮಾನ ವೇತನ ಅಥವಾ ಹೊರಗುತ್ತಿಗೆಯಡಿ ಕನಿಷ್ಟ 2 ವರ್ಷ ಸೇವೆಯನ್ನು ಸಲ್ಲಿಸಿರಬೇಕು. ಮತ್ತು ಈ ನಿಯಮಗಳು ಜಾರಿಗೆ ಬಂದ ದಿನಾಂಕದಲ್ಲಿಯೂ ಹಾಗೂ ಅರ್ಜಿ ಸಲ್ಲಿಸುವ ದಿನಾಂಕದಲ್ಲಿಯೂ ಕಾರ್ಯನಿರ್ವಹಿಸುತ್ತಿರಬೇಕು.
3. ನೇಮಕಾತಿಯನ್ನು ಮಂಗಳೂರು ಮಹಾನಗರಪಾಲಿಕೆಗೆ ಮಾತ್ರ ಸೀಮಿತಗೊಳಿಸಲಾಗಿದೆ. ಹಾಗೂ ಮಂಗಳೂರು ಮಹಾನಗರಪಾಲಿಕೆಯಲ್ಲಿ ಹೊರಗುತ್ತಿಗೆ ಒಳಚರಂಡಿ ಸಹಾಯಕರು ಹೊರಗುತ್ತಿಗೆ ಸಂಸ್ಥೆಯಲ್ಲಿ ಸಲ್ಲಿಸಿದ ಸೇವೆಯನ್ನು ಹಿರಿತನದಲ್ಲಿ ಪರಿಗಣಿಸಿ ಆದ್ಯತೆ ನೀಡಲಾಗುವುದು.
4. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು. ದೈಹಿಕವಾಗಿ ಸಾಮರ್ಥ್ಯವಿರುವ ಬಗ್ಗೆ ಗ್ರೂಪ್ 'ಡಿ' (ಒಳಚರಂಡಿ ಸಹಾಯಕರು) ನೌಕರರಿಗೆ ನಿಗಧಿಪಡಿಸಲಾದ ಕನಿಷ್ಠ ದೇಹ ದಾರ್ಡ್ಯತೆ ಹೊಂದಿರಬೇಕು. ಅರ್ಜಿ ಸಲ್ಲಿಕೆ ಹಾಗೂ ಆಯ್ಕೆ ಸಮಯದಲ್ಲಿ ಸರಕಾರಿ ವೈದ್ಯರ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
5. ದೈಹಿಕವಾಗಿ ಅನರ್ಹರಾಗಿದ್ದಾರೆ ಎಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರವು ಹೊಂದಿರುತ್ತದೆ.

## 11. ಕೆಳಕಂಡ ಮೂಲ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸುವುದು.

1. ಜನ್ಮ ದಿನಾಂಕವನ್ನು ನಮೂದಿಸಿರುವ ಆಧಾರ್/ ಜನನ ಪ್ರಮಾಣ ಪತ್ರ/ಪಡಿತರ ಚೀಟಿ/ ಮತದಾರರ ಗುರುತಿನ ಚೀಟಿ/ಎಸ್ಎಸ್ಎಲ್ ಸಿ/ ಜನ್ಮ ದಿನಾಂಕವನ್ನು ತೋರಿಸುವ ಶೈಕ್ಷಣಿಕ ಸಂಚಿತ ದಾಖಲೆಯ ಉದ್ಧೃತ ಭಾಗ.

2. ಒಳಚರಂಡಿ ಸಹಾಯಕರಾಗಿ ಸೇವೆ ಸಲ್ಲಿಸಿದ ಬಗ್ಗೆ ಜೇಷ್ಠತೆಯನ್ನು ಪರಿಶೀಲಿಸಲು ಕಾರ್ಮಿಕ ರಾಜ್ಯ ವಿಮೆ, (ಇ.ಎಸ್.ಐ) ಮತ್ತು ಭವಿಷ್ಯ ನಿಧಿ (ಪಿಎಫ್) ದಾಖಲಾತಿ ದೃಢೀಕೃತ ಪ್ರತಿಗಳು
3. ಸೈನಿಕ ಸೇವೆಯಿಂದ ಬಿಡುಗಡೆಯಾದ ಮಾಜಿ ಸೈನಿಕ ಮೀಸಲಾತಿ ಪ್ರಮಾಣ ಪತ್ರ ( ಮೀಸಲಾತಿ ಕೋರಿದ್ದಲ್ಲಿ)
4. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ -1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಗಳ ಜಾತಿ ಪ್ರಮಾಣ ಪತ್ರಗಳು ( ಮೀಸಲಾತಿ ಕೋರಿದ್ದಲ್ಲಿ)
5. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
7. ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
8. ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ದ್ದಲ್ಲಿಮೀಸಲಾತಿ ಕೋರಿ)
9. ವಾಸ್ತವ್ಯ ದೃಢೀಕರಣ ಪತ್ರವನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
10. ಮೇಲ್ಕಂಡಂತೆ ನಿಗದಿಪಡಿಸಿದ ಎಲ್ಲಾ ದಾಖಲೆಗಳನ್ನು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಮಾತ್ರ ಮೂಲ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

## 12. ಇತರೆ ಸೂಚನೆಗಳು:

1. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
2. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ಯಾವುದೇ ಕಾರಣಕ್ಕೂ ನಂತರದಲ್ಲಿ ಬದಲಾವಣೆ ಆಗುವ ವಿಳಾಸವನ್ನು ಪರಿಗಣಿಸಲಾಗುವುದಿಲ್ಲ.
3. ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದು ಪಡಿಸುವ ಅಥವಾ ವಿಧಿಸಲಾಗಿರುವ ಯಾವುದೇ ಷರತ್ತನ್ನು ಸಡಿಲಗೊಳಿಸುವ ಅಥವಾ ಹೆಚ್ಚುವರಿ ಷರತ್ತನ್ನು ವಿಧಿಸುವ, ತುಂಬಲಾಗುವ ಹುದ್ದೆಗಳ ಸಂಖ್ಯೆಯನ್ನು ಬದಲಾಯಿಸುವ/ನಿರ್ಣಯಿಸುವ ಅಧಿಕಾರವನ್ನು ಅಧ್ಯಕ್ಷರು ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರಿಯವರು ಕಾಯ್ದಿರಿಸಿಕೊಂಡಿರುತ್ತಾರೆ.
4. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.
5. ಆಯುಕ್ತರು, ಮಂಗಳೂರು ಮಹಾನಗರಪಾಲಿಕೆ ನೇಮಕಾತಿಗೆ ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ ಸಹಾಯ ಕೇಂದ್ರವನ್ನು ಪಾಲಿಕೆಯ ಕಟ್ಟಡದಲ್ಲಿ ತೆರೆಯಲಾಗಿದೆ. ಸಹಾಯವಾಣಿ ಸಂಖ್ಯೆ: 0824-2220313

ಅಧ್ಯಕ್ಷರು ,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ
ಹಾಗೂ ಆಯುಕ್ತರು,
ಮಂಗಳೂರು ಮಹಾನಗರಪಾಲಿಕೆ
ಮಂಗಳೂರು

ಪ್ರತಿಯನ್ನು :

1. ಮಾನ್ಯ ಸರಕಾರದ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಬೆಂಗಳೂರು-ಇವರಿಗೆ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಸರಕಾರದ ಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆ ಬೆಂಗಳೂರು, ಇವರಿಗೆ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ನಿರ್ದೇಶಕರು ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು, ಇವರಿಗೆ ಅವಗಾಹನೆಗಾಗಿ ಸಲ್ಲಿಸಿದೆ.
4. ಸಂಕಲನಾಧಿಕಾರಿ, ಸರಕಾರಿ ಹೊರವಲಯ ಮುದ್ರಣಾಲಯ, 6ನೇ ಮೈನ್, ಮೈಸೂರು ರಸ್ತೆ, ಜುಕಾಲೇ ಅಂಚೆ, ಕೆಂಗೇರಿ, ಬೆಂಗಳೂರು-560059. ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಕಳುಹಿಸುತ್ತಾ ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಆಯುಕ್ತರು ಮಂಗಳೂರು ಮಹಾನಗರಪಾಲಿಕೆ, ದ.ಕ. ಜಿಲ್ಲೆ, ಇವರಿಗೆ ಒದಗಿಸಲು ಕೋರಿದೆ.
5. ಪ್ರಾದೇಶಿಕ ಆಯುಕ್ತರು ಮೈಸೂರು ವಿಭಾಗ, ಮೈಸೂರು ರವರ ಅವಗಾಹನೆಗೆ ಸಲ್ಲಿಸಿದೆ .
6. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ದ.ಕ ಜಿಲ್ಲೆ –ಇವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಜಿಲ್ಲಾ ಅಧಿಕಾರಿ ಹಿಂದುಳಿದ ವರ್ಗಗಳ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ದ.ಕ, ಮಂಗಳೂರು.
8. ಉಪ ನಿರ್ದೇಶಕರು, ಮಕ್ಕಳ ಮತ್ತು ಮಹಿಳಾ ಅಭಿವೃದ್ಧಿ ಇಲಾಖೆ, ದ.ಕ. ಜಿಲ್ಲೆ, ಮಂಗಳೂರು.
9. ಮಂಗಳೂರು ಮಹಾನಗರ ಪಾಲಿಕೆಯ ಕಛೇರಿಯ ಸೂಚನಾ ಫಲಕಕ್ಕೆ.
10. ಕಂಪ್ಯೂಟರ್ ವಿಬಾಗಕ್ಕೆ ವೆಬ್ ಸೈಟ್ www.mangalorecity.gov.in ನಲ್ಲಿ ಪ್ರಕಟಿಸಲು.